# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 178 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | : 05.03.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಹಿಳೆಯರು ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಪ್ರೊತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಈ ಸಂಬಂಧ ತರಬೇತಿ ನೀಡಲಾಗುತ್ತಿದೆಯೇ; | 2024-25ನೇ ಸಾಲಿನಲ್ಲಿ ರೈತ ಮಹಿಳೆಯರು ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹಿಸಲು ಹಸು/ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ಶೇ.6 ರಷ್ಟು ಬಡ್ಡಿ ಸಹಾಯಧನ ನೀಡಲಾಗುತ್ತಿದ್ದು, ಇದುವರೆಗೆ 475 ಮಹಿಳೆಯರು ರೂ.7,03,780/-ಸಾವಿರ ಬಡ್ಡಿ ಸಹಾಯ ಧನ ಪಡೆದಿರುತ್ತಾರೆ. ಹಾಲು ಉತ್ಪಾದಕರಿಗೆ ಉತ್ತೇಜನ ಅಡಿಯಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲು ಪೂರೈಸುವ ಸದಸ್ಯರಿಗೆ ಪ್ರತಿ ಲೀಟರ್ ಹಾಲಿಗೆ ರೂ.5/- ರಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.<br><br>**ಮಹಿಳೆಯರನ್ನು ಒಳಗೊಂಡಂತೆ ಇತರೆ ರೈತರಿಗೆ ಈ ಕೆಳಕಂಡಂತೆ ಇನ್ನಿತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ.**<br><br>1. ಹೈನುಗಾರಿಕೆಯನ್ನು ಉತ್ತೇಜಿಸಲು ರಾಜ್ಯ ಸರ್ಕಾರ ಹಾಗೂ ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತದಿಂದ ವಿವಿಧ ಯೋಜನೆಗಳ ಮೂಲಕ ಹೈನುರಾಸು ಖರೀದಿಗಾಗಿ ಬಡ್ಡಿ ರಹಿತ, ಸುತ್ತು ನಿಧಿಯನ್ನು ಸಾಲದ ರೂಪದಲ್ಲಿ ನೀಡಲಾಗುವುದು, ಅಲ್ಲದೆ, ವಿವಿಧ ರೀತಿಯ ತಾಂತ್ರಿಕ ತರಬೇತಿಗಳನ್ನು ಕರ್ನಾಟಕ ಹಾಲು ಮಹಾಮಂಡಳ ವ್ಯಾಪ್ತಿಯಲ್ಲಿನ 4 ತರಬೇತಿ ಕೇಂದ್ರಗಳಿಂದ (ಮೈಸೂರು, ಧಾರವಾಡ, ಬೆಂಗಳೂರು ಮತ್ತು ಕಲಬುರಗಿ) ಹೈನುರಾಸು ನಿರ್ವಹಣೆ, ಸಂಘದ ಕಾರ್ಯದರ್ಶಿ/ ಅಧ್ಯಕ್ಷರು/ಹಾಲು ಪರೀಕ್ಷಕರು/ಸಂಘದ ಆಡಳಿತ ಮಂಡಳಿ, ಸಿಬ್ಬಂದಿಗಳಿಗೆ, ಕಂಪ್ಯೂಟರ್ ತರಬೇತಿ ಮತ್ತು ಸ್ವಸಹಾಯ ಗುಂಪಿನ ಪ್ರತಿನಿಧಿಗಳಿಗೆ ಆಯುರ್ವೇದ ಔಷಧಿ, ಪ್ರಥಮ ಚಿಕಿತ್ಸೆ, ಪಶು ಸಖಿ ತರಬೇತಿಯನ್ನು ನೀಡಲಾಗುತ್ತಿದೆ. ಗ್ರಾಮೀಣ ಮಟ್ಟದಲ್ಲಿ ರಾಜ್ಯ ಸರ್ಕಾರ ಮತ್ತು ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತದಿಂದ ಅನುದಾನದ ಮೂಲಕ ಅರಿವು ಕಾರ್ಯಕ್ರಮಗಳಾದ ಆರೋಗ್ಯ ಮತ್ತು ಪೌಷ್ಠಿಕ ಆಹಾರ, ಶುದ್ಧ ಹಾಲು ಉತ್ಪಾದನೆ, ಪಶು ಆಹಾರ ಮತ್ತು ಮೇವು ಅಭಿವೃದ್ಧಿ, ಲಿಂಗ ಸೂಕ್ಷ್ಮತೆ, ಕಾನೂನು ಸಾಕ್ಷರತೆ ಬಗ್ಗೆ ನೀಡಲಾಗುವುದು ವಿಶೇಷವಾಗಿ ಮಹಿಳೆಯರಿಗೆ ಶೈಕ್ಷಣಿಕ ಅಧ್ಯಯನ ಪ್ರವಾಸವನ್ನು ಗುಜರಾತಿನ ಅಮೂಲ್ ಗೆ ಕಳುಹಿಸಿಕೊಡಲಾಗುವುದು.<br>2. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಹಾಲು ಕರೆಯುವ ಯಂತ್ರ ವಿತರಿಸಲಾಗುತ್ತಿದೆ.<br>3. ರಾಜ್ಯದಲ್ಲಿ ಗುರುತಿಸಲ್ಪಟ್ಟ ಸಾಂಕ್ರಾಮಿಕ ರೋಗಗಳಾದ ಕಾಲುಬಾಯಿಜ್ವರ, ಗಳಲೆ ರೋಗ ಮತ್ತು ಕಂದು ರೋಗದ ವಿರುದ್ಧ ಜಾನುವಾರುಗಳಿಗೆ ಲಸಿಕೆ ಹಾಕಲಾಗುತ್ತಿದೆ. |

| | | |
|---|---|---|
| | | 4. ವಿಸ್ತರಣಾ ಘಟಕಗಳ ಬಲಪಡಿಸುವಿಕೆಯಡಿ ಮಿಶ್ರ ತಳಿಕರುಗಳ/ ಜಾನುವಾರು ಪ್ರದರ್ಶನ, ಹಾಲು ಕರೆಯುವ ಸ್ಪರ್ಧೆ, ಪ್ರಾಣಿಜನ್ಯ ರೋಗಗಳ ಜಾಗೃತಿ ಶಿಬಿರ, ರೈತರ ತರಬೇತಿ ಮತ್ತು ಪ್ರವಾಸ, ಜಿಲ್ಲಾ ಮಟ್ಟದ ಪಶುಮೇಳ, ಜಾನುವಾರು ಜಾತ್ರೆ, ತಾಂತ್ರಿಕ ಸಂಕಿರಣ ಇತ್ಯಾದಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದೆ.<br>5. ಉಚಿತ ಜಾನುವಾರು ಚಿಕಿತ್ಸಾ ಶಿಬಿರಗಳನ್ನು ಏರ್ಪಡಿಸುವ ಮೂಲಕ ಜಾನುವಾರುಗಳ ಆರೋಗ್ಯತಪಾಸಣೆ ಮಾಡಲಾಗುತ್ತಿದೆ.<br>6. ರಾಷ್ಟ್ರೀಯ ಜಾನುವಾರು ಮಿಷನ್ (ಕೇಂದ್ರ ಪುರಸ್ಕೃತ ಯೋಜನೆ)ಯಡಿ ಜಾನುವಾರುಗಳಿಗೆ ವಿಮಾಸೌಲಭ್ಯ ಒದಗಿಸಲಾಗಿದೆ.<br>7. ರಾಜ್ಯದಲ್ಲಿರುವ 4272 ಪಶುವೈದ್ಯಕೀಯ ಸಂಸ್ಥೆಗಳಲ್ಲಿ ದನ ಮತ್ತು ಎಮ್ಮೆಗಳಿಗೆ ರೋಗತಪಾಸಣೆ, ಸೂಕ್ತ ಚಿಕಿತ್ಸೆ ಮತ್ತು ಕೃತಕ ಗರ್ಭಧಾರಣೆ ಸೌಲಭ್ಯ ಒದಗಿಸಲಾಗುತ್ತಿದೆ.<br>8. ರಾಷ್ಟ್ರೀಯ ಕೃತಕ ಗರ್ಭಧಾರಣಾ ಯೋಜನೆಯಡಿ ಯಲ್ಲಿ ಶೇ.50ಕ್ಕಿಂತ ಕಡಿಮೆ ಕೃತಕ ಗೃಭಧಾರಣೆ ಪ್ರಗತಿಯಾಗಿರುವ ಜಿಲ್ಲೆಗಳನ್ನು ಆಯ್ಕೆ ಮಾಡಿಕೊಂಡು ಉಚಿತವಾಗಿ ಉತ್ಕೃಷ್ಟತಳಿಗಳ ವೀರ್ಯ ನಳಿಕೆಗಳನ್ನು ಉಪಯೋಗಿಸಿ ರೈತರ ಮನೆ ಬಾಗಿಲಿಗೆ ಹೋಗಿ ಕೃತಕಗರ್ಭಧಾರಣೆ ಸೌಲಭ್ಯ ಒದಗಿಸಲಾಗುತ್ತಿದೆ.<br>9. ಪಶುಪಾಲಕರ ಮನೆಯ ಬಾಗಿಲಲ್ಲಿ ರೋಗಗ್ರಸ್ಥ ಜಾನುವಾರುಗಳಿಗೆ ವಿಶೇಷ ತುರ್ತು ಚಿಕಿತ್ಸೆ ನೀಡಲು ಸುಸಜ್ಜಿತ ಪಶುಚಿಕಿತ್ಸಾ ಪಶುಸಂಜೀವಿನಿ ವಾಹನಗಳನ್ನು ಒದಗಿಸಲಾಗಿದೆ.<br>10. ಕರ್ನಾಟಕ ಹಾಲು ಮಹಾಮಂಡಳ ವ್ಯಾಪ್ತಿಯ ಜಿಲ್ಲಾ ಹಾಲು ಒಕ್ಕೂಟಗಳ ಮುಖಾಂತರ ಸಂಘಗಳಿಗೆ/ರೈತರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಆರ್ಥಿಕ ಸಹಾಯ, ಮೇವು ಮತ್ತು ಹಾಲು ಕರೆಯುವ ಯಂತ್ರಗಳ ವಿತರಣೆ, ರಿಯಾಯಿತಿ ದರದಲ್ಲಿ ಮೇವಿನ ಬೀಜಗಳು, ರಾಸು ಗುಂಪು ವಿಮೆ, ಪಶು ಆಹಾರ ಮತ್ತು ಖನಿಜ ಮಿಶ್ರಣ ಸರಬರಾಜು, ಪಶುಔಷಧ ವಿತರಣೆ, ಕೃತಕಗರ್ಭಧಾರಣೆ ಸೌಲಭ್ಯಗಳನ್ನು ಹಾಲು ಪೂರೈಕೆಗನುಗುಣವಾಗಿ ಇನ್ನಿತರೇ ಸೌಲಭ್ಯಗಳನ್ನು ನೀಡುವ ಮೂಲಕ ಹೈನುಗಾರರನ್ನು ಪ್ರೋತ್ಸಾಹಿಸಲಾಗುತ್ತಿದೆ.<br><br>ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಡಿ ಪ್ರಸ್ತುತ 10 ಜಿಲ್ಲೆಗಳಲ್ಲಿ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ರೈತರಿಗೆ, ರೈತ ಮಹಿಳೆಯರಿಗೆ ವೈಜ್ಞಾನಿಕ ಹೈನುಗಾರಿಕೆ ತರಬೇತಿ ನೀಡುವುದರ ಮೂಲಕ ಅರಿವು ಮೂಡಿಸುವ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.<br><br>2024-25ನೇ ಸಾಲಿನ ಆಯವ್ಯಯದಲ್ಲಿ ಆಸಕ್ತ ರೈತರಿಗೆ, ರೈತ ಮಹಿಳೆಯರಿಗೆ ತರಬೇತಿ ನೀಡುವ ಮೂಲಕ ರೈತರ ಆದಾಯ ಹೆಚ್ಚಿಸಲಾಗುವುದು ಎಂಬ ಯೋಜನೆ ಘೋಷಣೆಯಾಗಿರುತ್ತದೆ.<br><br>ಪ್ರಸ್ತುತ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 10 ತರಬೇತಿ ಕೇಂದ್ರಗಳ ಜೊತೆಗೆ ಉಳಿದ 20 ಜಿಲ್ಲೆಗಳಲ್ಲಿ ಹೊಸದಾಗಿ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲು ಸ್ಥಳ ಗುರುತಿಸಿ ಸರ್ಕಾರದ ಆದೇಶವಾಗಿರುತ್ತದೆ. |
| ಆ) | ಕಳೆದ ಹತ್ತು ವರ್ಷಗಳಲ್ಲಿ ಎಷ್ಟು ಮಹಿಳೆಯರಿಗೆ ತರಬೇತಿ ನೀಡಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು) | ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ವತಿಯಿಂದ 10 ವರ್ಷಗಳಲ್ಲಿ 62582 ರೈತ ಮಹಿಳೆಯರಿಗೆ ತರಬೇತಿ ನೀಡಲಾಗಿದ್ದು, ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ. |

| | | |
|---|---|---|
| ಇ) | ಈ ವೃತ್ತಿಯಲ್ಲಿ ಅತೀ ಕಡಿಮೆ ಆಸಕ್ತಿ ತೋರಿದ ಜಿಲ್ಲೆಗಳನ್ನು ಗುರುತಿಸಲಾಗಿದೆಯೇ; ಈ ವೃತ್ತಿಯಲ್ಲಿ ಮಹಿಳೆಯರಿಗೆ ಆಸಕ್ತಿ ಹೆಚ್ಚಿಸಲು ಕೈಗೊಂಡ ಕ್ರಮಗಳೇನು? | ಹೈನುಗಾರಿಕೆಯಲ್ಲಿ ಅತೀ ಕಡಿಮೆ ಆಸಕ್ತಿ ಹೊಂದಿರುವ ಜಿಲ್ಲೆಗಳೆಂದರೆ, ಯಾದಗಿರಿ, ಕೊಪ್ಪಳ, ಕಲ್ಬುರ್ಗಿ, ರಾಯಚೂರು ಮತ್ತು ಬಳ್ಳಾರಿ ಜಿಲ್ಲೆಗಳನ್ನು ಗುರುತಿಸಲಾಗಿದ್ದು, ಸದರಿ ಜಿಲ್ಲೆಯ ಮಹಿಳಾ ಹೈನುಗಾರರಿಗೆ ಒಕ್ಕೂಟಗಳಿಂದ ವಿವಿಧ ತರಬೇತಿ ಮತ್ತು ಸಹಾಯಧನ ಒದಗಿಸುವ ಮೂಲಕ ಮಹಿಳೆಯರಿಗೆ ಆಸಕ್ತಿ ಮೂಡಿಸಲು ಪ್ರಯತ್ನಿಸಲಾಗುತ್ತಿದೆ. ಕೊಪ್ಪಳ ಜಿಲ್ಲೆಯಲ್ಲಿ ಹೈನೋದ್ಯಮಕ್ಕೆ ಉತ್ತೇಜನ ನೀಡಿ ಹಾಲು ಉತ್ಪಾದನೆಯನ್ನು ಹೆಚ್ಚಿಸುವ ಉದ್ದೇಶದಿಂದ ಜಿಲ್ಲೆಯ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಸಂಜೀವಿನಿ (ಎನ್.ಆರ್.ಎಂ.ಎಲ್.) ಯೋಜನೆ ಮತ್ತು ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತದಿಂದ ಸಹಯೋಗದಲ್ಲಿ 100 ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ಸ್ಥಾಪನೆ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಈ ಜಿಲ್ಲೆಗಳು ಸೇರಿದಂತೆ ಇನ್ನಿತರೆ ಜಿಲ್ಲೆಗಳಲ್ಲಿಯೂ ಹೈನುಗಾರಿಕೆಯಲ್ಲಿ ಮಹಿಳೆಯರಿಗೆ ಆಸಕ್ತಿ ಹೆಚ್ಚಿಸಲು 2024-25ನೇ ಸಾಲಿನಲ್ಲಿ ರೈತ ಮಹಿಳೆಯರು ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹಿಸಲು ಹಸು/ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ಶೇ.6ರಷ್ಟು ಬಡ್ಡಿ ಸಹಾಯಧನ ನೀಡಲಾಗುತ್ತಿದ್ದು, ಇದುವರೆಗೆ 475 ಮಹಿಳೆಯರು ರೂ:7,03,780/-ಸಾವಿರ ಬಡ್ಡಿಸಹಾಯ ಧನ ಪಡೆದಿರುತ್ತಾರೆ.<br><br>ಹಾಲು ಉತ್ಪಾದಕರಿಗೆ ಉತ್ತೇಜನ ಅಡಿಯಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲು ಪೂರೈಸುವ ಸದಸ್ಯರಿಗೆ ಪ್ರತಿ ಲೀಟರ್ ಹಾಲಿಗೆ ರೂ.5/- ರಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.<br><br>ಲಿಂಗ ನಿರ್ಧಾರಿತ ವೀರ್ಯ ನಳಿಕೆಗಳನ್ನು ಕೃತಕ ಗರ್ಭಧಾರಣೆ ಕಾರ್ಯಕ್ರಮದಲ್ಲಿ ಉಪಯೋಗಿಸುವುದರ ಮೂಲಕ ಹೆಣ್ಣು ಕರುಗಳನ್ನು ಪಡೆಯುವಂತೆ ಕ್ರಮವಹಿಸಲಾಗಿದೆ. |

ಸಂಖ್ಯೆ: ಪಸಂಮೀ 13 ಕಹಾಮ 2025

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು